# <u>ಕರ್ನಾಟಕ ವಿಧಾನ ಪರಿಷತ್ತು</u>

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 174 (230) |
| ಸದಸ್ಯರ ಹೆಸರು | : | ಡಾ\|\| ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 14-12-2021 |
| ಉತ್ತರಿಸುವ ಸಚಿವರು | : | ನಗರಾಭಿವೃದ್ಧಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಯಾವ ಯಾವ ನಗರ ಪಾಲಿಕೆ, ನಗರ ಸಭೆಗಳು ಸ್ಮಾರ್ಟ್ ಸಿಟಿ ಯೋಜನೆಗೆ ಒಳಪಟ್ಟಿವೆ; (ಸಂಪೂರ್ಣ ವಿವರಗಳನ್ನು ನೀಡುವುದು) | ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಪ್ರಾಯೋಜಿತವಾದ ಸ್ಮಾರ್ಟ್ ಸಿಟಿ ಯೋಜನೆಯು 2015-16 ರ ಸಾಲಿನಲ್ಲಿ ಪ್ರಾರಂಭವಾಗಿದ್ದು, ರಾಜ್ಯದ 7 **<u>ಮಹಾನಗರ ಪಾಲಿಕೆಗಳಾದ</u>** ಬೆಳಗಾವಿ, ದಾವಣಗೆರೆ, ಹುಬ್ಬಳ್ಳಿ-ಧಾರವಾಡ, ಮಂಗಳೂರು, ಶಿವಮೊಗ್ಗ, ತುಮಕೂರು ಮತ್ತು ಬೆಂಗಳೂರು ನಗರಗಳು ಆಯ್ಕೆಯಾಗಿರುತ್ತವೆ. ಆದರೆ ಯಾವುದೇ ನಗರ ಸಭೆಯು ಯೋಜನೆಯಲ್ಲಿ ಆಯ್ಕೆಯಾಗಿರುವುದಿಲ್ಲ. |
| ಆ) | ಸ್ಮಾರ್ಟ್ ಸಿಟಿ ಯೋಜನೆ ಅಡಿಯಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಬೇಕೆಂದು ಸರ್ಕಾರ ಮಾನದಂಡವನ್ನು ವಿಧಿಸಿದೆ; (ವಿವರ ನೀಡುವುದು) | ಕೇಂದ್ರ ಸರ್ಕಾರವು ಅಭಿಯಾನದ ಮಾರ್ಗಸೂಚಿಯಲ್ಲಿ ನಗರದ ಮೂಲಭೂತ ಸೌಕರ್ಯ ಹಾಗೂ ಡಿಜಿಟಲೀಕರಣ ವ್ಯವಸ್ಥೆ ಅಭಿವೃದ್ಧಿಗೆ ಪೂರಕವಾಗಿ ಕೈಗೊಳ್ಳಬಹುದಾದ ಪ್ರಮುಖ ವರ್ಗಗಳನ್ನು ಸೂಚಿಸಿದ್ದು, ಅದರಂತೆ ಆಯ್ಕೆಯಾದ 7 ನಗರಗಳು ಈ ಕೆಳಕಂಡ ವರ್ಗಕ್ಕೆ ಸೇರಿರುವ ಕಾಮಗಾರಿಗಳನ್ನು ಅನುಷ್ಠಾನಗೊಳಿಸುತ್ತಿವೆ.<br><br>**ನೀರು ಸರಬರಾಜು, ವಿದ್ಯುಚ್ಛಕ್ತಿ ಸಂಪರ್ಕ ವ್ಯವಸ್ಥೆ, ನೈರ್ಮಲ್ಯ ಹಾಗೂ ಘನತ್ಯಾಜ್ಯ ನಿರ್ವಹಣೆ, ಸಾರ್ವಜನಿಕ ಸಾರಿಗೆ, ಕೈಗೆಟಕುವ ದರದಲ್ಲಿ ವಸತಿ, ಮಾಹಿತಿ ತಂತ್ರಜ್ಞಾನ ಮತ್ತು ಡಿಜಿಟಲಿಕರಣ ಮೂಲಕ ಸಾರ್ವಜನಿಕ ಸೇವೆ ಒದಗಿಸುವುದು, ಇ-ಆಡಳಿತ, ಸುಸ್ಥಿರ ಪರಿಸರ, ಸಾರ್ವಜನಿಕರ ಸುರಕ್ಷತೆ, ಆರೋಗ್ಯ ಮತ್ತು ಶಿಕ್ಷಣ .**<br><br>ಯೋಜನೆಯ ಅನುಷ್ಠಾನಕ್ಕೆ ಕೇಂದ್ರ ಸರ್ಕಾರವು ಹೊರಡಿಸಿರುವ ಮಾರ್ಗಸೂಚಿಯ ಉದ್ಧೃತ ಪುಟದ ಪ್ರತಿಯನ್ನು "**<u>ಅನುಬಂಧ-1</u>** ರಲ್ಲಿ" ನೀಡಿದೆ. |
| ಇ) | ತುಮಕೂರು, ದಾವಣಗೆರೆ ನಗರಗಳಲ್ಲಿ ಸ್ಮಾರ್ಟ್ ಸಿಟಿ ಯೋಜನೆಯಡಿಯಲ್ಲಿ ಶೈಕ್ಷಣಿಕ ಪ್ರಗತಿಗಾಗಿ ಕೈಗೊಂಡಿರುವ ಕಾಮಗಾರಿಗಳು ಯಾವುವು; | ಶೈಕ್ಷಣಿಕ ಪ್ರಗತಿಗಾಗಿ ತುಮಕೂರು ಹಾಗೂ ದಾವಣಗೆರೆ ನಗರಗಳಲ್ಲಿ ಸ್ಮಾರ್ಟ್ ಸಿಟಿ ಯೋಜನೆಯಡಿಯಲ್ಲಿ ಸ್ಮಾರ್ಟ್ ಕ್ಲಾಸ್ ರೂಮ್, ಶೈಕ್ಷಣಿಕ ಕೊಠಡಿಗಳ ನಿರ್ಮಾಣ ಹಾಗೂ ನವೀಕರಣ, ಡಿಜಿಟಲ್ ಲೈಬ್ರರಿ, ಮತ್ತು ಅಂಗನವಾಡಿ ಕೇಂದ್ರಗಳ ನಿರ್ಮಾಣ ಹಾಗೂ ನವೀಕರಣ ಹೀಗೆ ಹಲವಾರು ಕಾಮಗಾರಿಗಳನ್ನು ಹಮ್ಮಿಕೊಳ್ಳಲಾಗಿದೆ.<br><br>ಶೈಕ್ಷಣಿಕ ಪ್ರಗತಿಗಾಗಿ ದಾವಣಗೆರೆ ನಗರದಲ್ಲಿ 08 ಕಾಮಗಾರಿಗಳನ್ನು ಹಾಗೂ ತುಮಕೂರು ನಗರದಲ್ಲಿ 20 ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ.<br><br>ನಗರವಾರು ಕಾಮಗಾರಿಗಳ ವಿವರಗಳನ್ನು **<u>ಅನುಬಂಧ-2</u>** ರಲ್ಲಿ ನೀಡಿದೆ. |

| | | |
|---|---|---|
| ಈ) | ಇದಕ್ಕಾಗಿ ಬಿಡುಗಡೆ ಮಾಡಲಾಗಿರುವ ಅನುದಾನ ಎಷ್ಟು (ಮಾಹಿತಿ ನೀಡುವುದು) | ಶೈಕ್ಷಣಿಕ ಕಾಮಗಾರಿ/ ಯೋಜನೆಗಳಿಗೆ ದಾವಣಗೆರೆ ನಗರದಲ್ಲಿ ರೂ.33.46 ಕೋಟಿ ಮೊತ್ತದಲ್ಲಿ 08 ಕಾಮಗಾರಿಗಳನ್ನು ಹಾಗೂ ತುಮಕೂರು ನಗರದಲ್ಲಿ ರೂ.56.96 ಕೋಟಿ ಮೊತ್ತದಲ್ಲಿ 20 ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ. ಕಾಮಗಾರಿ/ಯೋಜನೆಯ ವಿವರಗಳನ್ನು **ಅನುಬಂಧ-2** ರಲ್ಲಿ ನೀಡಿದೆ. |
| ಉ) | ಈ ಯೋಜನೆಯಡಿಯಲ್ಲಿ ಅವ್ಯವಹಾರ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಮಾಹಿತಿ ನೀಡುವುದು | ಈ ಯೋಜನೆಯಡಿಯಲ್ಲಿ ಅವ್ಯವಹಾರ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. |

ಸಂಖ್ಯೆ:ನಅಇ 207 ಸಿಎಸ್ಎಸ್ 2021

**(ಬಿ.ಎ.ಬಸವರಾಜ)**
ನಗರಾಭಿವೃದ್ಧಿ ಸಚಿವರು

(ಬಿ.ಎ. ಬಸವರಾಜ)
ನಗರಾಭಿವೃದ್ಧಿ ಸಚಿವರು